## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 426 (490)
ಮಾನ್ಯ ಸದಸ್ಯರ ಹೆಸರು : ಶ್ರೀ ಸಿ.ಎನ್.ಮಂಜೇಗೌಡ
ಉತ್ತರಿಸುವ ದಿನಾಂಕ : 30-01-2026
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ವಿವಿಧ ತಾಲ್ಲೂಕುಗಳಲ್ಲಿ ಎಸ್‌ಸಿಪಿ / ಟಿಎಸ್‌ಪಿ (SCP/TSP) ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಾಲೋನಿಗಳ ಅಭಿವೃದ್ಧಿಗಾಗಿ ಮಂಜೂರಾದ ಅನುದಾನದಲ್ಲಿ ಬಳಕೆಯಾಗದೆ ವಾಪಸ್ ಹೋಗಿರುವ ಮೊತ್ತ ಎಷ್ಟು; | ಬಳಕೆಯಾಗದ ಅನುದಾನ ಜಿಲ್ಲೆಯಿಂದ ಹಿಂಪಡೆದಿರುವುದಿಲ್ಲ. |
| ಆ) | ಈ ಜಿಲ್ಲೆಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಥವಾ ಅಪೂರ್ಣಗೊಂಡಿರುವ ಅಂಬೇಡ್ಕರ್ ಸಮುದಾಯ ಭವನಗಳ ಪುನಶ್ಚೇತನಕ್ಕೆ ಮೀಸಲಿಟ್ಟ ಹಣ ಎಷ್ಟು? | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಥವಾ ಅಪೂರ್ಣ ಗೊಂಡಿರುವ ಅಂಬೇಡ್ಕರ್ ಸಮುದಾಯ ಭವನಗಳಿಗೆ ಸರ್ಕಾರದ ಸುತ್ತೋಲೆ ಸಂ: ಸಕಇ 115 ಪಕವಿ 2020, ದಿನಾಂಕ:09-06-2020 ರನ್ವಯ ಡಾ\|\| ಬಿ.ಆರ್ ಅಂಬೇಡ್ಕರ್/ಡಾ\|\| ಬಾಬು ಜಗಜೀವನರಾಮ್ ಸಮುದಾಯ ಭವನಗಳಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನವನ್ನು ಸ್ಥಳೀಯ ಮೂಲಗಳಿಂದ ಕ್ರೋಢೀಕರಿಸಿಕೊಂಡು ಭವನದ ಕಾಮಗಾರಿಯನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿರುತ್ತದೆ.<br><br>2025-26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯವರಿಗೆ ವಿವಿಧ ಅಭಿವೃದ್ಧಿ ಯೋಜನೆಯ ಲೆಕ್ಕಶೀರ್ಷಿಕೆ: 4225-01-796-0-01 ರಡಿ ಡಾ\|\| ಬಿ.ಆರ್ ಅಂಬೇಡ್ಕರ್ / ಡಾ\|\| ಬಾಬು ಜಗಜೀವನರಾಂ / ಸಮುದಾಯ ಭವನಗಳ ನಿರ್ಮಾಣ ಕಾರ್ಯಕ್ರಮಕ್ಕಾಗಿ ರೂ.8000.00 ಲಕ್ಷಗಳನ್ನು ನಿಗಧಿಪಡಿಸಲಾಗಿರುತ್ತದೆ. |

**ಸಕಇ 55 ಎಸ್‌ಎಲ್‌ಪಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**